# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 05.02.2022 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ಶ್ರೀ ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 4 | ಶ್ರೀ ಬಸವೇಗೌಡ | ಸದಸ್ಯರು |
| 5 | ಹೆಚ್ ಟಿ. ಮುನಿರಾಜು | ಕಂದಾಯ ವಸೂಲಿಗಾರರು |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**<u>ವಿಷಯ ಸಂಖ್ಯೆ: 1:–</u> ಹೊಯ್ಸಳ ನಗರದಲ್ಲಿ ಬೀಳುವ ಸ್ಥಿತಿಯಲ್ಲಿರುವ ಮರವನ್ನು ತೆರವುಗೊಳಿಸುವ ಬಗ್ಗೆ**

ಸದಸ್ಯರಾದ ಬಸವೇಗೌಡ ರವರು ಮಾತನಾಡಿ, ಹೆಗ್ಗನಹಳ್ಳಿ ವ್ಯಾಪ್ತಿಯ ಸುಂಕದಕಟ್ಟೆ, ಹೊಯ್ಸಳನಗರದಲ್ಲಿ 1ನೇ ಡಿ ಅಡ್ಡರಸ್ತೆ, ಸಮೃದ್ಧಿ ಗ್ರ್ಯಾಂಡ್ ಹೋಟೆಲ್ ಬಳಿ ಇರುವ ಮರವು ಬಳಿ ಸ್ಥಿತಿಯಲ್ಲಿದ್ದು ಅನಾಹುತಗಳುಂಟಾಗುವ ಮುಂಚೆ ಮುಂಜಾಗ್ರತ ಕ್ರಮವಾಗಿ ಮರವನ್ನು ತೆರವುಗೊಳಿಸುವಂತೆ ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿ ರವರು ಮಾತನಾಡಿ ಈ ಸಂಬಂಧ ಅರಣ್ಯಾಧಿಕಾರಿಗಳಿಗೆ ಪತ್ರ ಬರೆಯುವಂತೆ ಕಾರ್ಯದರ್ಶೀರವರಿಗೆ ಸೂಚಿಸಿದರು.

- **<u>ವಿಷಯ ಸಂಖ್ಯೆ: 2:–</u> ರಸ್ತೆಗುಂಡಿಗಳ ಬಗ್ಗೆ**

  ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಶೇಕಡಾ 30ರಷ್ಟು ರಸ್ತೆಗುಂಡಿಗಳನ್ನು ಮುಚ್ಚಲಾಗಿದೆ. ಇನ್ನುಳಿದ ರಸ್ತೆಗುಂಡಿಗಳನ್ನು ಮುಚ್ಚಲು ವೆಟ್‌ಮಿಕ್‌ಅನ್ನು ಅಳವಡಿಸಲಾಗಿರುತ್ತದೆ. ಶೀಘ್ರದಲ್ಲಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

- **ವಿಷಯ ಸಂಖ್ಯೆ: 3 :- ಬೆಂಗಳೂರು ನಗರದ ರಸ್ತೆಗಳಲ್ಲಿ ಹಲವಾರು ಉಪಲಬ್ಧ ಅಳವಡಿಸುವ ಸಂಸ್ಥೆಗಳು ವಿರುದ್ಧ ಎಫ್.ಐ.ಆರ್ ದಾಖಲಿಸುವ ಬಗ್ಗೆ**

ಮಾನ್ಯ ನೋಡಲ್ ಅಧಿಕಾರಿರವರು ಮಾತನಾಡಿ ವಾರ್ಡ್ 71ರ ವ್ಯಾಪ್ತಿಯ ರಸ್ತೆಗಳಲ್ಲಿ 'ಉಪಲಬ್ಧ ಅಳವಡಿಸುವ ಸಂಸ್ಥೆಗಳು'ಗಳಿಂದ ಉಪಲಬ್ಧಗಳನ್ನು ಅಳವಡಿಸುವ ಕಾಮಗಾರಿಗಾಗಿ ಅನುಮತಿಯನ್ನು ಬಿ.ಬಿ.ಎಂ.ಪಿ ವತಿಯಿಂದ ನೀಡುತ್ತಿದ್ದು, ಕೆಲವೊಂದು ಸಂಸ್ಥೆಗಳು ಸದರಿ ಉಪಲಬ್ಧವನ್ನು ಅಳವಡಿಸುವ ಕಾರ್ಯವನ್ನು ಕ್ರಮಬದ್ಧವಾಗಿ ನಡೆಸದೇ ಇದ್ದು, ಇದರಿಂದ ಹಲವಾರು ರಸ್ತೆ ಅಫಘಾತಗಳು ಸಂಭವಿಸಿರುತ್ತವೆ. ಈ ಹಿನ್ನೆಲೆಯಲ್ಲಿ ಇನ್ನು ಮುಂದೆ ಅಂತಹ ಸಂಸ್ಥೆಗಳ ವಿರುದ್ಧ ಎಫ್.ಐ.ಆರ್ ದಾಖಲಿಸುವಂತೆ ಸಭೆಯಲ್ಲಿ ತಿಳಿಸಿದರು.

- **ವಿಷಯ ಸಂಖ್ಯೆ: 4 :- ಸಾಕುಪ್ರಾಣಿಗಳು & ಬೀದಿನಾಯಿಗಳ ಬಗ್ಗೆ ವಹಿಸಬೇಕಾದ ಕ್ರಮಗಳ ಸಂಬಂಧ ಬಂದಿರುವ ಸುತ್ತೋಲೆಯ ಬಗ್ಗೆ**

ಪ್ರಾಣಿ ಕಲ್ಯಾಣ ಮಂಡಳಿಯವರು ಸ್ಥಳೀಯ ಕ್ಷೇಮಾಭಿವೃದ್ಧಿ ಸಂಘದವರಿಗೆ ಸಾಕು ಪ್ರಾಣಿ & ಬೀದಿನಾಯಿಗಳ ಬಗ್ಗೆ ವಹಿಸಬೇಕಾದ ಕ್ರಮಗಳ ಬಗ್ಗೆ ಕಳಿಸಿರುವ ಸುತ್ತೋಲೆಯನ್ನು ಸ್ಥಳೀಯ ಕ್ಷೇಮಾಭಿವೃದ್ಧಿ ಸಂಘದವರಿಗೆ ತಿಳಿಸಲಾಯಿತು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| **ಸದಸ್ಯ ಕಾರ್ಯದರ್ಶಿ<br>ಹಾಗೂ ಸಹಾಯಕ ಅಭಿಯಂತರರು<br>ವಾರ್ಡ್ 71, ಹೆಗ್ಗನಹಳ್ಳಿ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** | **ವಾರ್ಡ್ ಸಮಿತಿ ಅಧ್ಯಕ್ಷರು<br>ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ<br>ವಾರ್ಡ್ ನಂ.71, ಹೆಗ್ಗನಹಳ್ಳಿ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |

**ಪ್ರತಿಯನ್ನು:**

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.